ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 460 ಗ್ರಾಪಂಕಾ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 05.07.2017

## ಅಧಿಕೃತ ಜ್ಞಾಪನ

ವಿಷಯ: ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ಅಂತರ ಜಿಲ್ಲಾ ವರ್ಗಾವಣೆಯ ಬಗ್ಗೆ.

****

ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16-ಎ ರನ್ವಯ ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಅವರ ಕೋರಿಕೆಯ ಮೇರೆಗೆ ಅವರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಿಂದ **ತುಮಕೂರು** ಜಿಲ್ಲೆಗೆ ಅಂತರ ಜಿಲ್ಲಾ ವರ್ಗಾವಣೆ ಮಾಡಿ, ಕೆಳಕಂಡ ಎಲ್ಲಾ ಷರತ್ತುಗಳನ್ನು ಪೂರೈಸುವ ನಿಬಂಧನೆಗೊಳಪಡಿಸಿದ ಆದೇಶಿಸಿದೆ.

| ಕ್ರ.ಸಂ. | ನೌಕರರ ಹೆಸರು | ಹಾಲಿ ಕಾರ್ಯನಿರ್ವಹಿಸುತ್ತಿರುವ ಸ್ಥಳ ಮತ್ತು ಜಿಲ್ಲೆ | ವರ್ಗಾಯಿಸಿರುವ ಜಿಲ್ಲೆ |
|---|---|---|---|
| 1 | ಕುಮಾರಿ ಸರೋಜಮ್ಮ ಬಿ.ಎನ್. | ಬ. ನಿಡೋಣಿ ಗ್ರಾಮ ಪಂಚಾಯತಿ, ವಿಜಯಪುರ ತಾಲ್ಲೂಕು, ವಿಜಯಪುರ ಜಿಲ್ಲೆ. | ತುಮಕೂರು ಜಿಲ್ಲೆ |
| 2 | ಶ್ರೀ ಮಧು ಹೆಚ್.ಎಂ. | ನಿಡ್ಲೆ ಗ್ರಾಮ ಪಂಚಾಯತಿ, ಬೆಳ್ತಂಗಡಿ ತಾಲ್ಲೂಕು, ದಕ್ಷಿಣ ಕನ್ನಡ ಜಿಲ್ಲೆ. | ತುಮಕೂರು ಜಿಲ್ಲೆ |
| 3 | ಶ್ರೀಮತಿ ಆರ್. ಲಕ್ಷ್ಮಿದೇವಮ್ಮ | ಮಾಕನಡಕು ಗ್ರಾಮ ಪಂಚಾಯತಿ, ಕೂಡ್ಲಿಗಿ ತಾಲ್ಲೂಕು, ಬಳ್ಳಾರಿ ಜಿಲ್ಲೆ. | ತುಮಕೂರು ಜಿಲ್ಲೆ |
| 4 | ಶ್ರೀಮತಿ ವನಜಾಕ್ಷಿ ಎನ್ | ಆಲೂರು ಗ್ರಾಮ ಪಂಚಾಯತಿ, ಕೂಡ್ಲಗಿ ತಾಲ್ಲೂಕು ಬಳ್ಳಾರಿ ಜಿಲ್ಲೆ | ತುಮಕೂರು ಜಿಲ್ಲೆ |
| 5 | ಶ್ರೀ ಲಕ್ಷ್ಮೀಕಾಂತ.ಎಂ | ನಾಗಮಾರಪಳ್ಳಿ ಗ್ರಾಮ ಪಂಚಾಯತಿ, ಬೀದರ್ ತಾಲ್ಲೂಕು, ಬೀದರ್ ಜಿಲ್ಲೆ. | ತುಮಕೂರು ಜಿಲ್ಲೆ |
| 6 | ಶ್ರೀಮತಿ ಶಿಲ್ಪ ಹೆಚ್.ಸಿ | ವೀರಾಪುರ ಗ್ರಾಮ ಪಂಚಾಯತಿ, ಮಧುಗಿರಿ ತಾಲ್ಲೂಕು, ಬೀದರ್ ಜಿಲ್ಲೆ. | ತುಮಕೂರು ಜಿಲ್ಲೆ |
| 7 | ಶ್ರೀಮತಿ ಲತಾ ಟಿ. | ಬಾಳೇಕುಂದ್ರಿ ಬಿ.ಕೆ. ಗ್ರಾಮ ಪಂಚಾಯತಿ, ಬೆಳಗಾವಿ ತಾಲ್ಲೂಕು, ಬೆಳಗಾವಿ ಜಿಲ್ಲೆ. | ತುಮಕೂರು ಜಿಲ್ಲೆ |
| 8 | ಶ್ರೀ ಪ್ರದೀಪ್ ಎ.ಎನ್. | ಹಿತ್ತಲ ಗ್ರಾಮ ಪಂಚಾಯತಿ, ಶಿಕಾರಿಪುರ ತಾಲ್ಲೂಕು, ಶಿವಮೊಗ್ಗ ಜಿಲ್ಲೆ. | ತುಮಕೂರು ಜಿಲ್ಲೆ |
| 9 | ಶ್ರೀ ಶಾಹಿದ್ ಅಫ್ರಿದಿ ಹೆಚ್.ಎಸ್. | ಬೆಳ್ಳೂರು ಗ್ರಾಮ ಪಂಚಾಯತಿ, ನಾಗಮಂಗಲ ತಾಲ್ಲೂಕು, ಮಂಡ್ಯ ಜಿಲ್ಲೆ. | ತುಮಕೂರು ಜಿಲ್ಲೆ |
| 10 | ಕುಮಾರಿ ಭಾಗ್ಯಮ್ಮ ಆರ್. | ಕಮದೊಡ ಗ್ರಾಮ ಪಂಚಾಯತಿ, ರಾಣೇಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ. | ತುಮಕೂರು ಜಿಲ್ಲೆ |
| 11 | ಶ್ರೀ ನಟರಾಜು.ಬಿ.ಆರ್. | ಆರೆಮಲ್ಲಾಪುರ ಗ್ರಾಮ ಪಂಚಾಯತಿ, ರಾಣೆಬೆನ್ನೂರು ತಾಲ್ಲೂಕು, ಹಾವೇರಿ ಜಿಲ್ಲೆ. | ತುಮಕೂರು ಜಿಲ್ಲೆ |
| 12 | ಶ್ರೀ. ಎಸ್. ಹೆಚ್ ತಿಪ್ಪೇಸ್ವಾಮಿ | ಕುರುಗಲ್ ಗ್ರಾಮ ಪಂಚಾಯತಿ,ಕೋಲಾರ ತಾಲ್ಲೂಕು, ಕೋಲಾರ ಜಿಲ್ಲೆ. | ತುಮಕೂರು ಜಿಲ್ಲೆ |

| | | | |
|---|---|---|---|
| 13 | ಶ್ರೀಮತಿ ಅಪೂರ್ವ ಪಿ.ಕೆ. | ಅಂತಾ ಸಾಣೇಹಳ್ಳಿ ಗ್ರಾಮ ಪಂಚಾಯತಿ, ಹೊಸದುರ್ಗ ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. | ತುಮಕೂರು ಜಿಲ್ಲೆ |
| 14 | ಶ್ರೀ ಲಕ್ಷ್ಮೀಕಾಂತ ಜೆ ಸಿ | ದಿಂಡಿವಾರ ಗ್ರಾಮ ಪಂಚಾಯತಿ, ಹಿರಿಯೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ. | ತುಮಕೂರು ಜಿಲ್ಲೆ |
| 15 | ಶ್ರೀ ಮಹೇಶ್‌ಕುಮಾರ್ ಎನ್.ಕೆ. | ಪುರಲೇಹಳ್ಳಿ ಗ್ರಾಮ ಪಂಚಾಯತಿ, ಅರಸೀಕೆರೆ ತಾಲ್ಲೂಕು, ಹಾಸನ ಜಿಲ್ಲೆ. | ತುಮಕೂರು ಜಿಲ್ಲೆ |
| 16 | ಶ್ರೀ ದೇವರಾಜು.ಕೆ.ಆರ್ | ಸಿದ್ದಲಿಂಗಪುರ ಗ್ರಾ.ಪಂ ಮೈಸೂರು ತಾಲ್ಲೂಕು ಹಾಗೂ ಮೈಸೂರು ಜಿಲ್ಲೆ | ತುಮಕೂರು ಜಿಲ್ಲೆ |
| 17 | ಶ್ರೀ ಎಸ್.ಎಲ್. ಆನಂದ್ | ಮಳ್ಳೂರು ಗ್ರಾಮ ಪಂಚಾಯತಿ, ಶಿಡ್ಲಘಟ್ಟ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ. | ತುಮಕೂರು ಜಿಲ್ಲೆ |
| 18 | ಶ್ರೀ ಲಕ್ಷ್ಮೀಕಾಂತ್ ಎಂ ಮಲ್ಲಣ್ಣ | ನಾಗಮಾರಪಳ್ಳಿ ಗ್ರಾಮ ಪಂಚಾಯತಿ, ಔರಾದ ತಾಲ್ಲೂಕು, ಬೀದರ್ ಜಿಲ್ಲೆ. | ತುಮಕೂರು ಜಿಲ್ಲೆ |

**ಷರತ್ತುಗಳು:**

1. ಮೊದಲು ನೌಕರರು ಕರ್ತವ್ಯ ನಿರ್ವಹಿಸುತ್ತಿರುವ ಜಿಲ್ಲೆಯಲ್ಲಿನ ತಮ್ಮ ಜೇಷ್ಠತೆಯನ್ನು ಬಿಟ್ಟು ಕೊಡಲು ಹಾಗೂ ವರ್ಗಾವಣೆಗೊಂಡ ಜಿಲ್ಲೆಯಲ್ಲಿನ ತನ್ನ ವೃಂದದ ನೌಕರರ ಜೇಷ್ಠತಾ ಪಟ್ಟಿಯಲ್ಲಿ ಕೊನೆಯವನಾಗಿ ಸೇರ್ಪಡೆಗೊಳ್ಳಲು ಸಿದ್ದರಿರುವುದಾಗಿ ಲಿಖಿತವಾಗಿ ಒಪ್ಪಿಗೆ ನೀಡತಕ್ಕದ್ದು. ಯಾವ ಜಿಲ್ಲೆಗೆ ವರ್ಗಾವಣೆ ಆಗಿ ಹೋಗಬೇಕು ಆ ಜಿಲ್ಲೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಪೂರ್ವಾನುಮೋದನೆ ಪಡೆದುಕೊಳ್ಳತಕ್ಕದ್ದು. ಇದನ್ನು ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳನ್ನು ಬಿಡುಗಡೆ ಮಾಡಬೇಕಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಲಿಖಿತವಾಗಿ ಖಚಿತಪಡಿಸಿಕೊಳ್ಳತಕ್ಕದ್ದು.
2. ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ವೃಂದದಲ್ಲಿ ಸದರಿ ನೌಕರರ ಪರಿವೀಕ್ಷಣಾವಧಿ ತೃಪ್ತಿಕರವಾಗಿ ಘೋಷಣೆಯಾಗಿರಬೇಕು.
3. ನೌಕರರ ವಿರುದ್ಧ ಯಾವುದೇ ಇಲಾಖಾ ವಿಚಾರಣೆ ಇರಬಾರದು ಹಾಗೂ ಹೂಡಲು ಉದ್ದೇಶಿಸಿರಬಾರದು.
4. ಇವರ ಜೇಷ್ಠತೆಯು ವರ್ಗಾವಣೆ ಹೊಂದಿದ ಜಿಲ್ಲೆಯಲ್ಲಿ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತಾ ನಿಯಮಗಳು) ನಿಯಮಗಳು, 1957 ರ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.
5. ಈ ನೌಕರರು ಯಾವುದೇ ವರ್ಗಾವಣೆ ಭತ್ಯೆ, ಪ್ರಯಾಣ ಭತ್ಯೆ ಹಾಗೂ ಸೇರುವಿಕೆ ಕಾಲಕ್ಕೆ ಅರ್ಹರಿರುವುದಿಲ್ಲ.
6. **ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳ ವೃಂದದ ನೇರ ನೇಮಕಾತಿ ಕೋಟಾದಲ್ಲಿ ಖಾಲಿ ಹುದ್ದೆ ಲಭ್ಯವಿದ್ದಲ್ಲಿ ಮಾತ್ರ ಪರಿಗಣಿಸತಕ್ಕದ್ದು.**
7. ಯಾವುದೇ ಕಾರಣಕ್ಕೂ ಬಡ್ತಿ ಕೋಟಾದ ಹುದ್ದೆಯ ಎದುರು ಪರಿಗಣಿಸತಕ್ಕದ್ದಲ್ಲ.
8. ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ನಿಯಮ 16 ಎ ರನ್ವಯ ಒಂದಕ್ಕಿಂತ ಹೆಚ್ಚು ಸಲ ಒಂದು ಜಿಲ್ಲಾ ವೃಂದದಿಂದ ಮತ್ತೊಂದು ಜಿಲ್ಲಾ ವೃಂದಕ್ಕೆ ವರ್ಗಾವಣೆ ಮಾಡಲು ಅವಕಾಶವಿರುವುದಿಲ್ಲ. ಈಗಾಗಲೇ ಗ್ರಾಮ ಪಂಚಾಯತಿ ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳು ಒಂದು ಬಾರಿ ಅಂತರ್ ಜಿಲ್ಲೆ ವರ್ಗಾವಣೆ ಆಗಿದ್ದರೆ ಮತ್ತೊಮ್ಮೆ ಪರಿಗಣಿಸಲು ಅವಕಾಶವಿರುವುದಿಲ್ಲ.
9. ಸಿಬ್ಬಂದಿ ಆಡಳಿತ ಸುಧಾರಣಾ ಇಲಾಖೆಯ ಸುತ್ತೋಲೆ ಸಂಖ್ಯೆ: ಡಿಪಿಎಆರ್ 2 ಎಸ್‌ಟಿಆರ್ 2017, ದಿನಾಂಕ 27.03.2017 ರನ್ವಯ ಮೇಲ್ಕಂಡ ನೌಕರರ ವರ್ಗಾವಣೆಗೆ ಕ್ರಮವಹಿತಕ್ಕದ್ದು.
10. ಕ್ರಮ ಸಂಖ್ಯೆ 2, 4, 5, 12 ಮತ್ತು 15 ರಲ್ಲಿನ ನೌಕರರು ಸರ್ಕಾರಕ್ಕೆ ಸ್ವಯಂ ಮನವಿ ನೀಡಿದ್ದು, ಈ ಬಗ್ಗೆ ಲಿಖಿತವಾಗಿ ಖಚಿತಪಡಿಸಿಕೊಂಡು ವರ್ಗಾಯಿಸತಕ್ಕದ್ದು.

ಮೇಲಿನ ನಿಬಂಧನೆಗಳು ಪೂರೈಸುವ ಬಗ್ಗೆ ಖಚಿತಪಡಿಸಿಕೊಂಡ ನಂತರ ಮಾತ್ರ ಸದರಿ ನೌಕರರನ್ನು ಅವರ ಹುದ್ದೆಯಿಂದ ಬಿಡುಗಡೆ ಮಾಡತಕ್ಕದ್ದು.

(ಟಿ.ಎ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿ:

1. **ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ವಿಜಯಪುರ, ದಕ್ಷಿಣ ಕನ್ನಡ, ಬಳ್ಳಾರಿ, ಬೀದರ, ಬೆಳಗಾವಿ, ಶಿವಮೊಗ್ಗ, ಮಂಡ್ಯ, ಹಾವೇರಿ, ಕೋಲಾರ, ಚಿತ್ರದುರ್ಗ, ಹಾಸನ, ಮೈಸೂರು, ಚಿಕ್ಕಬಳ್ಳಾಪುರ, ಬೀದರ ಮತ್ತು ತುಮಕೂರು** ಜಿಲ್ಲಾ ಪಂಚಾಯತಿಗಳು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳು.
4. ನಿರ್ದೇಶಕರು (ಪಂ.ರಾಜ್-1), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಸಹಾಯಕರು.
5. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.